**ಮೊದಲನೇ ಅಪರ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಕನಕಪುರ.**
CC No.119/2016

CW -4 PW - 1

| | | |
|---|---|---|
| ಹೆಸರು | ಃ | ಶಿವಲಿಂಗೇಗೌಡ |
| ತಂದೆಯ ಹೆಸರು | ಃ | ಲಿಂಗೇಗೌಡ |
| ವಯಸ್ಸು | ಃ | 70 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸ | ಃ | ಕಂಸಾಗರ |

ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಃ ಮಾನ್ಯ ಎಪಿಪಿ ಯವರಿಂದ ಃ ದಿನಾಂಕ 26.08.2022

ನ್ಯಾಯಾಲಯದ ಮುಂದಿರುವ ಆರೋಪಿಗಳು ಗೊತ್ತಿಲ್ಲ.

ನನಗೆ ಈ ಪ್ರಕರಣದ ಸಂಬಂಧ ಯಾವುದೇ ವಿಷಯ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ಮಹಜರ್ ಕ್ರಮ ಜರುಗಿಲ್ಲ ಮತ್ತು ನನ್ನ ಮುಂದೆ 2 ನಾಡಬಂದೂಕುಗಳನ್ನು ಮತ್ತು ಟಿವಿಎಸ್ ವಾಹನವನ್ನು ಅಮಾನತು ಪಡಿಸಿಕೊಂಡಿಲ್ಲ. ನಾನು ಪೋಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಸಾಕ್ಷಿ ಮಹಜರ್ ನ್ನು ನೋಡಿ ಗುರುತಿಸಿದ್ದು, ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರ್ ನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮಾನ್ಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲುಗೆ ಅನುಮತಿ ಕೋರಿರುತ್ತಾರೆ. ಅನುಮತಿಸಲಾಯಿತು)**

ದಿಃ 17.12.2013 ರಂದು ರಾತ್ರಿ ಸುಮಾರು 2 ಗಂಟೆ ಸಮಯಕ್ಕೆ ನಾನು ಊರಿನಲ್ಲಿದ್ದಾಗ ಸಾತನೂರು ಪೋಲೀಸ್ ಠಾಣೆಯ ಪಿಎಸ್ ಐ ರವರು ಗ್ರಾಮಕ್ಕೆ ಬಂದು ನನ್ನನ್ನು ಪಂಚರಾಗುವಂತೆ ಕೋರಿಕೊಂಡು, ಹೊಸಕಬ್ಬಾಳು ಗ್ರಾಮದಿಂದ ಸೂರನಹಳ್ಳಿ ಗ್ರಾಮಕ್ಕೆ ಹೋಗುವ ರಸ್ತೆಯಲ್ಲಿ ಬರಮಾಡಿಕೊಂಡು ಪೋಲೀಸರು ಹಿಡಿದುಕೊಂಡಿದ್ದ ಒಬ್ಬ ವ್ಯಕ್ತಿಯನ್ನು ತೋರಿಸಿ, ಸದರಿ ವ್ಯಕ್ತಿ ರಾಜೀವನಾಯ್ಕ ಬಾಚನಹಳ್ಳಿದೊಡ್ಡಿ ವಾಸಿ ಎಂದು ಮತ್ತು

ಇನ್ನೊಬ್ಬ ವ್ಯಕ್ತಿ ಗೋಪಾಲನಾಯ್ಕ ಬಾಚನಹಳ್ಳಿದೊಡ್ಡಿ ವಾಸಿ ಎಂದು ತಿಳಿಸಿದರು ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಟಿವಿಎಸ್ ಎಕ್ಸಲ್ ವಾಹನವನ್ನು ಮತ್ತು 2 ನಾಡಬಂದೂಕುಗಳನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ಸದರಿ ಇಬ್ಬರೂ ವ್ಯಕ್ತಿಗಳು ಬಂದೂಕುಗಳನ್ನು ಪ್ರಾಣಿ ಬೇಟೆಯಾಡಲು ಯಾವುದೇ ಪರವಾನಿಗೆ ಇಲ್ಲದೇ ಅನಧಿಕೃತವಾಗಿ ಅಕ್ರಮವಾಗಿ ಇಟ್ಟುಕೊಂಡಿದ್ದರು ಎಂದು ತಿಳಿಸಿದರು ಎಂದರೆ ಸರಿಯಲ್ಲ. ನಿಪಿ-1 ರಂತೆ ಮಹಜರ್ ಕ್ರಮ ಜರುಗಿಸಿ ಸ್ಥಳದಲ್ಲೇ ನನ್ನ ಸಹಿ ಪಡೆದರು ಎಂದರೆ ಸರಿಯಲ್ಲ. ನನಗೆ ಈಗ ಓದಿ ಹೇಳಿದಂತೆ ಪೋಲೀಸರ ಮುಂದೆ ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸಾಕ್ಷಿ ನಿರಾಕರಿಸಿದ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ಆರೋಪಿಗಳೊಂದಿಗೆ ರಾಜೀ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ಶ್ರೀ. ವಕೀಲರಿಂದಃ**

ಏನು ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

ಮೊದಲನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಕನಕಪುರ